ಮಿಲಿಟರಿ.

ಇಸ್ತಿಹಾರ್ನಾಮೆ.

ತಾರೀಖು 2ನೆ ಏಪ್ರೆಲ್ 1909.

ನಂ. ಮಿಲಿಟರಿ 910-1—150-08-3, ಘನವನ್ನು ಹೊಂದಿದ ಶ್ರೀಮಂ ಮಹಿಸೂರು ಸೀಮೆಯ ಮಹಾರಾಜರವರು ಇಂಪೀರಿಯಲ್ ಸರ್ವಿಸ್ ರೆಜಿಮೆಂಟ್ 'ಎ' ಸ್ಕ್ವಾಡ್ರನ್ ದಫೇದಾರ್ ಸಯದ್ ಅಬ್ದುಲ್ ರಹಮಾನ್‌ರವರನ್ನು ಅದೇ ರೆಜಿಮೆಂಟಿನಲ್ಲಿ 5ನೆ ಗ್ರೇಡ್ ಟ್ರೂಪ್ ಕಮ್ಯಾಂಡರ್ ಜಮೂದಾರ್ ರ್ಯಾಂಕಿಗೆ 1909ನೆ ಇಸವಿ ಮಾರ್ಚ್ ತಿಂಗಳು 25ನೆ ತಾರೀಖಿನ ಲಾಗಾಯಿತು ಬಡ್ತಿ ಮಾಡಿರುತ್ತಾರೆ.

ಹುಕುಂ ಬಮೋಜೀಬ್,
ಕೆ. ಎಸ್. ಚಂದ್ರಶೇಖರ ಐಯ್ಯರ್,
ಸೆಕ್ರಿಟರಿ.

ತಾರೀಖು 7ನೆ ಏಪ್ರೆಲ್ 1909.

ನಂ. 9797—ಸ್ಯಾನಿಟರಿ 131-08-10, ಕೋಲಾರ ಡಿಸ್ಟ್ರಿಕ್ಟು ಶ್ರೀನಿವಾಸಪುರ ತಾಲ್ಲೂಕಿನ ರೋಣೂರು ಗ್ರಾಮಕ್ಕೆ ಶ್ರೀ ವೆಂಕಟರಮಣಸ್ವಾಮಿ ರಥೋತ್ಸವ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮಂ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮಂ ಮಹಾರಾಜರವರ ಸರ್ಕಾರದವರು 1909ನೆಯ ವರ್ಷದ ಏಪ್ರೆಲ್ 12ನೆ ತಾರೀಖಿನಿಂದ 1909ನೆ ಏಪ್ರೆಲ್ 21ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ಉತ್ಸವಕ್ಕೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ಹುಕುಂ ಬಮೋಜೀಬ್,
ಕೆ. ಎಸ್. ಚಂದ್ರಶೇಖರ ಅಯ್ಯರ್,
ಜನರಲ್ ಮತ್ತು ರೆವಿನ್ಯೂ ಇಲಾಖೆಗಳ ಸೆಕ್ರಿಟರಿ.